# ಕರ್ನಾಟಕ ರಾಜ್ಯಪಾಲರ ಸಚಿವಾಲಯ

ಲೋಕ ಭವನ, ಬೆಂಗಳೂರು.

**No. GS 14 KOM 2025** **Date : 02.04.2026**

## ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕುಲಪತಿ ಹುದ್ದೆಗೆ ಅರ್ಜಿ ಆಹ್ವಾನ

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು, ಇಲ್ಲಿನ ಕುಲಪತಿ ಹುದ್ದೆಗೆ ಅರ್ಹತೆಯುಳ್ಳ ಪ್ರಾಧ್ಯಾಪಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ವಿಶ್ವವಿದ್ಯಾಲಯ ಧನ ಸಹಾಯಗಳ ಆಯೋಗದ ಮಾರ್ಗಸೂಚಿಗಳು ಹಾಗೂ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಅಧಿನಿಯಮ, 1992 ರನ್ವಯ ಕನಿಷ್ಠ 10 ವರ್ಷಗಳ ಕಾಲ ಪ್ರಾಧ್ಯಾಪಕರಾಗಿ ಅಥವಾ ತತ್ಸಮಾನ ಹುದ್ದೆಯ ಕಾರ್ಯಾನುಭವ ಹೊಂದಿರತಕ್ಕದ್ದು ಹಾಗೂ ವಿದ್ಯಾರ್ಹತೆ, ಸಂಶೋಧನೆ, ಶೈಕ್ಷಣಿಕ ಮತ್ತು ಆಡಳಿತಾತ್ಮಕ ಅನುಭವ ಇತ್ಯಾದಿ ವಿವರಗಳೊಂದಿಗೆ ವೆಬ್ ಸೈಟ್ **www.ksoumysuru.ac.in** ನಲ್ಲಿ ಲಭ್ಯವಿರುವ ನಿಗದಿತ ಅರ್ಜಿ ನಮೂನೆಯಲ್ಲಿ ಸ್ವಯಂಘೋಷಣೆಯೊಂದಿಗೆ "ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ಪಿ.ಬಿ. ನಂ. 5033, ಲೋಕ ಭವನ, ಬೆಂಗಳೂರು–560001" ಇವರಿಗೆ ದಿನಾಂಕ: 10.05.2026ರ ಸಂಜೆ 5.30ರೊಳಗೆ ತಲುಪುವಂತೆ ನಾಲ್ಕು ಪ್ರತಿಗಳಲ್ಲಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಹಾಗೂ ಅರ್ಜಿಯ **soft copy** ಯನ್ನು **email** ಮೂಲಕ : **us.university.rb@karnataka.gov.in** ಗೆ ಕಳುಹಿಸುವುದು.

ಸಹಿ/–

(ಆರ್. ಪ್ರಭುಶಂಕರ್)

ರಾಜ್ಯಪಾಲರ ವಿಶೇಷ ಕಾರ್ಯದರ್ಶಿ

DIPR/CP/6496/NR/2025-26